# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ:ಡಿಇವಿ-02:2026-27/2337 ದಿನಾಂಕ:22.09.2026

**"ಸುತ್ತೋಲೆ"**

**ವಿಷಯ:"ಮಾದಕ ವ್ಯಸನ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಅಭಿಯಾನ" ಆಯೋಜಿಸುವ ಕುರಿತು.**

ಉಲ್ಲೇಖ:1. ರಾಜ್ಯ ಪ್ರಧಾನ ಕಾರ್ಯದರ್ಶಿ, ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ, ಬೆಂಗಳೂರು ಇವರ ಪತ್ರ ಸಂಖ್ಯೆ:NHRIC/TUM/UNIV/DRUG-AWARE /2026 /026 ದಿನಾಂಕ:08.09.2026

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:17.09.2026

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ (NHRIC) ವತಿಯಿಂದ ವಿದ್ಯಾರ್ಥಿಗಳು ಹಾಗೂ ಯುವಜನರನ್ನು ಮಾದಕ ವ್ಯಸನದಿಂದ ದೂರವಿಡುವ ಮತ್ತು ಮಾದಕ ವಸ್ತು ಮುಕ್ತ ಶೈಕ್ಷಣಿಕ ವಾತಾವರಣ ನಿರ್ಮಿಸುವ ಉದ್ದೇಶದಿಂದ ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿಶೇಷ **"ಮಾದಕ ವ್ಯಸನ ವಿರೋಧಿ ಜಾಗೃತಿ ಅಭಿಯಾನ"** ಆಯೋಜಿಸಲು ಉದ್ದೇಶಿಸಿರುತ್ತಾರೆ. ಮಾದಕ ವಸ್ತುಗಳ ಬಳಕೆ ಯುವಜನರ ಶಿಕ್ಷಣ, ಆರೋಗ್ಯ, ಮಾನಸಿಕ ಸ್ಥೈರ್ಯ, ಕುಟುಂಬ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ, ಅಪರಾಧ ಚಟುವಟಿಕೆಗಳು ಮತ್ತು ಸಾಮಾಜಿಕ ಸಮಸ್ಯೆಗಳಿಗೆ ಕಾರಣವಾಗುವ ಸಾಧ್ಯತೆಯೂ ಇದೆ. ಆದ್ದರಿಂದ ಕಾಲೇಜು ಹಂತದಲ್ಲೇ ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮಾಹಿತಿ, ಕಾನೂನು ಅರಿವು ಹಾಗೂ ಮಾದಕ ವಸ್ತುಗಳಿಂದ ದೂರವಿರುವ ಕುರಿತು ಪರಿಣಾಮಕಾರಿ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿರುತ್ತಾರೆ.

ಈ ಸಂಬಂಧ ಉಲ್ಲೇಖ(02)ರ ಪತ್ರವನ್ನು ಲಗತ್ತಿಸಿದ್ದು, ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ **"ಮಾದಕ ವ್ಯಸನ ವಿರೋಧಿ ಜಾಗೃತಿ ಅಭಿಯಾನ"** ಆಯೋಜಿಸಲು ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ ಇವರಿಗೆ ಪತ್ರದಲ್ಲಿ ತಿಳಿಸಿರುವ ಅಂಶದಂತೆ, ಅಗತ್ಯ ಸೌಲಭ್ಯ ಮತ್ತು ಸಹಕಾರವನ್ನು ಒದಗಿಸುವಂತೆ ಈ ಮೂಲಕ ತಿಳಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಪತ್ರದಲ್ಲಿ ನಮೂದಿಸಿರುವ ಕಾರ್ಯಕ್ರಮ ನಿರ್ವಾಹಕರು (ಮೊ:9632296944) ಇವರನ್ನು ಸಂಪರ್ಕಿಸುವಂತೆ ಈ ಮೂಲಕ ತಿಳಿಸಲಾಗಿದೆ.

**ಆದೇಶದ ಮೇರೆಗೆ,**

**ಉಪಕುಲಸಚಿವರು.**

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಸ್ನಾತಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.**

ಪ್ರತಿಗಳು:

1. ರಾಜ್ಯ ಪ್ರಧಾನ ಕಾರ್ಯದರ್ಶಿ, ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ, #3/1, ಸಾಲಿಟರ್ ಛೇಂಬರ್, ಜಕ್ಕೂರು ಮೈನ್ ರೋಡ್, ಅಮೃತಹಳ್ಳಿ, ಬೆಂಗಳೂರು –ಮೊ:7483573500.
2. ಸಿಸ್ಟಮ್ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತು.ವಿ.ತು.–ಈ ಸುತ್ತೋಲೆಯನ್ನು ಸಂಬಂಧಿಸಿದ ಕಾಲೇಜುಗಳಿಗೆ ಇ–ಮೇಲ್ ಕಳುಹಿಸುವುದು.
3. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತು.ವಿತು.
4. ಕಚೇರಿ ಪ್ರತಿ.

Lic. No.: RJN-4-00109-2022/23

# ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ (ರಿ.)

# NATIONAL HUMAN RIGHTS INVESTIGATION COUNCIL®

United We Stand for Human Rights

REGISTERED BY NITI AYOGA / REGISTERED BY NGO GOVT. OF INDIA / MSME / EANUDHAN / DSE / 80G / 12A / CSR-1

#3/1, Solitar Chamber, Jakkur Main Road, Hoodi Layout, Amruthahalli, Bengaluru - 560092 Mob: 7483573500 Email: NHRICINDIA@gmail.com

ಈ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತುಮಕೂರು ವಿಶ್ವವಿದ್ಯಾನಿಲಯವು,

- ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅಧಿಕೃತ ಸುತ್ತೋಲೆ/ನಿರ್ದೇಶನ ನೀಡಬೇಕು.
- ಪ್ರತಿ ಕಾಲೇಜಿನಲ್ಲಿ ಕಾರ್ಯಕ್ರಮ ಆಯೋಜಿಸಲು ಪ್ರಾಂಶುಪಾಲರಿಗೆ ಅಗತ್ಯ ಅನುಮತಿ ನೀಡಬೇಕು;
- ಕಾರ್ಯಕ್ರಮದ ದಿನಾಂಕ ಮತ್ತು ಸಮಯವನ್ನು ಕಾಲೇಜು ಆಡಳಿತದೊಂದಿಗೆ ಸಮನ್ವಯಗೊಳಿಸಲು ಅವಕಾಶ ಕಲ್ಪಿಸಬೇಕು;
- ವಿದ್ಯಾರ್ಥಿಗಳ ಹೆಚ್ಚಿನ ಭಾಗವಹಿಸುವಿಕೆಗೆ ಅಗತ್ಯ ಸಹಕಾರ ನೀಡುವಂತೆ ಸೂಚಿಸಬೇಕು;
- NSS, NCC, ಯುವಜನ ಹಾಗೂ ಸಂಬಂಧಪಟ್ಟ ವಿಭಾಗಗಳ ಸಹಕಾರ ಪಡೆಯಲು ಅವಕಾಶ ಕಲ್ಪಿಸಬೇಕು;
- ಕಾರ್ಯಕ್ರಮ ಆಯೋಜನೆಗೆ ಅಗತ್ಯವಾದ ಸಭಾಂಗಣ, ಧ್ವನಿವರ್ಧಕ ವ್ಯವಸ್ಥೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಕಾಲೇಜು ಮಟ್ಟದಲ್ಲಿ ಒದಗಿಸಲು ಸೂಚಿಸಬೇಕು.

ಯುವಜನರ ಭವಿಷ್ಯವನ್ನು ರಕ್ಷಿಸುವುದು ಕೇವಲ ಒಂದು ಸಂಸ್ಥೆಯ ಜವಾಬ್ದಾರಿಯಲ್ಲ; ಅದು ಶೈಕ್ಷಣಿಕ ಸಂಸ್ಥೆಗಳು, ಸರ್ಕಾರ, ಸಂಘ-ಸಂಸ್ಥೆಗಳು ಹಾಗೂ ಸಮಾಜದ ಸಾಮೂಹಿಕ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ಮುಂಚೂಣಿಯಲ್ಲಿ ನಿಂತು ತನ್ನ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಈ ಜಾಗೃತಿ ಅಭಿಯಾನಕ್ಕೆ ಅವಕಾಶ ಕಲ್ಪಿಸಿದಲ್ಲಿ, ಸಾವಿರಾರು ವಿದ್ಯಾರ್ಥಿಗಳಿಗೆ ನೇರವಾಗಿ ಪರಿಣಾಮಕಾರಿ ಸಂದೇಶ ತಲುಪಿಸಲು ಸಾಧ್ಯವಾಗಲಿದೆ. ಆದ್ದರಿಂದ, ಈ ಮನವಿಯನ್ನು ಸಾಮಾಜಿಕ ಹಾಗೂ ವಿದ್ಯಾರ್ಥಿ ಹಿತದೃಷ್ಟಿಯಿಂದ ಪರಿಗಣಿಸಿ, ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯಕ್ರಮ ಆಯೋಜಿಸಲು ಅನುಮತಿ ನೀಡಿ, ಸಂಬಂಧಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ ಅಗತ್ಯ ನಿರ್ದೇಶನ ಹಾಗೂ ಸಹಕಾರ ನೀಡುವಂತೆ ತುರ್ತು ಕ್ರಮ ಕೈಗೊಳ್ಳಬೇಕಾಗಿ ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ ವತಿಯಿಂದ ಕೋರಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:** ಶೇಕ್ ಮೊಹಮ್ಮದ್, ಕಾರ್ಯಕ್ರಮ ನಿರ್ವಾಹಕರು, **+91 9632296944**

ಧನ್ಯವಾದಗಳೊಂದಿಗೆ,

ತಮ್ಮ ವಿಶ್ವಾಸಿ

ಅನಿಲ್ ಕುಮಾರ್ ಎನ್ 08-9-26

ರಾಜ್ಯ ಪ್ರಧಾನ ಕಾರ್ಯದರ್ಶಿ

ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ (NHRIC)

ಬೆಂಗಳೂರು

ಪ್ರತಿಯನ್ನು ಮಾಹಿತಿಗಾಗಿ

1. ರಾಜ್ಯಾಧ್ಯಕ್ಷರು ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ ಬೆಂಗಳೂರು
2. ಕಚೇರಿ ಪ್ರತಿ

Lic. No.: RJN-4-00109-2022/23

# ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ (ರಿ.)

## NATIONAL HUMAN RIGHTS INVESTIGATION COUNCIL®

United We Stand for Human Rights

REGISTERED BY NITI AYOGA / REGISTERED BY NGO GOVT. OF INDIA / MSME / EANUDHAN / DSE / 80G / 12A / CSR-1

#3/1, Solitar Chamber, Jakkur Main Road, Hoodi Layout, Amruthahalli, Bengaluru - 560092 Mob: 7483573500 Email: NHRICINDIA@gmail.com

ಸಂ. NHRIC/TUM/UNIV/DRUG-AWARE/2026/026

ದಿನಾಂಕ: 08-09-2026

ಗೆ,

**ಮಾನ್ಯ ಕುಲಸಚಿವರು,**
ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು.

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ "ಮಾದಕ ವ್ಯಸನ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಅಭಿಯಾನ" ಆಯೋಜಿಸಲು ಅನುಮತಿ ನೀಡಿ, ಎಲ್ಲಾ ಕಾಲೇಜುಗಳಿಗೆ ಅಧಿಕೃತ ನಿರ್ದೇಶನ ಹಾಗೂ ಅಗತ್ಯ ಸಹಕಾರ ನೀಡುವಂತೆ ಕೋರಿ.

ಮಾನ್ಯರೇ,

ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ (NHRIC) ವತಿಯಿಂದ ವಿದ್ಯಾರ್ಥಿಗಳು ಹಾಗೂ ಯುವಜನರನ್ನು ಮಾದಕ ವ್ಯಸನದಿಂದ ದೂರವಿಡುವ ಮತ್ತು ಮಾದಕ ವಸ್ತು ಮುಕ್ತ ಶೈಕ್ಷಣಿಕ ವಾತಾವರಣ ನಿರ್ಮಿಸುವ ಉದ್ದೇಶದಿಂದ ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿಶೇಷ "ಮಾದಕ ವ್ಯಸನ ವಿರೋಧಿ ಜಾಗೃತಿ ಅಭಿಯಾನ" ಆಯೋಜಿಸಲು ಉದ್ದೇಶಿಸಲಾಗಿದೆ. ಮಾದಕ ವಸ್ತುಗಳ ಬಳಕೆ ಯುವಜನರ ಶಿಕ್ಷಣ, ಆರೋಗ್ಯ, ಮಾನಸಿಕ ಸ್ಥೈರ್ಯ, ಕುಟುಂಬ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ, ಅಪರಾಧ ಚಟುವಟಿಕೆಗಳು ಮತ್ತು ಸಾಮಾಜಿಕ ಸಮಸ್ಯೆಗಳಿಗೆ ಕಾರಣವಾಗುವ ಸಾಧ್ಯತೆಯೂ ಇದೆ. ಆದ್ದರಿಂದ ಕಾಲೇಜು ಹಂತದಲ್ಲಿಯೇ ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮಾಹಿತಿ, ಕಾನೂನು ಅರಿವು ಹಾಗೂ ಮಾದಕ ವಸ್ತುಗಳಿಂದ ದೂರವಿರುವ ಕುರಿತು ಪರಿಣಾಮಕಾರಿ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ, ತುಮಕೂರು ವಿಶ್ವವಿದ್ಯಾನಿಲಯವು ತನ್ನ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅಧಿಕೃತವಾಗಿ ಸೂಚನೆ/ಸುತ್ತೋಲೆ ಹೊರಡಿಸಿ, ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿಯ ಸಹಯೋಗದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಅಗತ್ಯ ಅನುಮತಿ ಹಾಗೂ ಸಹಕಾರ ನೀಡುವಂತೆ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಗೆ ನಿರ್ದೇಶನ ನೀಡಬೇಕೆಂದು ಈ ಮೂಲಕ ಮನವಿ ಮಾಡಿಕೊಳ್ಳುತ್ತೇವೆ.

**ಕಾರ್ಯಕ್ರಮದ ಪ್ರಮುಖ ಉದ್ದೇಶಗಳು:**

1. ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವುದು.
2. ಮಾದಕ ವ್ಯಸನದ ದೈಹಿಕ, ಮಾನಸಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಪರಿಣಾಮಗಳ ಕುರಿತು ಅರಿವು ಮೂಡಿಸುವುದು.
3. ಮಾದಕ ವಸ್ತುಗಳ ಅಕ್ರಮ ಬಳಕೆ ಮತ್ತು ಸಾಗಾಟಕ್ಕೆ ಸಂಬಂಧಿಸಿದ ಕಾನೂನು ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವುದು.
4. ವಿದ್ಯಾರ್ಥಿಗಳನ್ನು ಮಾದಕ ವ್ಯಸನದಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಲು ಪ್ರೇರೇಪಿಸುವುದು.
5. ವ್ಯಸನಕ್ಕೆ ಒಳಗಾದವರಿಗೆ ಲಭ್ಯವಿರುವ ಸಹಾಯ, ಚಿಕಿತ್ಸೆ ಮತ್ತು ಪುನರ್ವಸತಿ ವ್ಯವಸ್ಥೆಗಳ ಕುರಿತು ಮಾಹಿತಿ ನೀಡುವುದು.
6. ಕಾಲೇಜು ಆವರಣಗಳಲ್ಲಿ ಮಾದಕ ವಸ್ತುಗಳ ವಿರುದ್ಧ "Zero Tolerance" ಮನೋಭಾವ ಬೆಳೆಸಲು ಜಾಗೃತಿ ಮೂಡಿಸುವುದು.
7. ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಪೋಷಕರಲ್ಲಿ, ಮಾದಕ ವಸ್ತುಗಳ ವಿರುದ್ಧ ಸಾಮೂಹಿಕ ಜವಾಬ್ದಾರಿಯ ಅರಿವು ಮೂಡಿಸುವುದು.

15/9/26

15/9/26

08-09-26